**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಸಿ.ಟಿ. ರವಿ ರವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ ಒದಗಿಸುವ ಕುರಿತು.**

**ಪ್ರಶ್ನೆ:** ಉದಯವಾಣಿ ದಿನಪತ್ರಿಕೆಯಲ್ಲಿ "ರಾಜ್ಯದಲ್ಲಿ ಕಳೆದ 5 ವರ್ಷದಲ್ಲಿ 1500 ಮಕ್ಕಳು ನಾಪತ್ತೆ, ಈ ಪೈಕಿ ಹೆಣ್ಣು ಮಕ್ಕಳೇ ಅಧಿಕ, ಇನ್ನೂ 1336 ಮಂದಿ ಸುಳಿವಿಲ್ಲ, ಕಿಡ್ನಾಪ್‌ನಲ್ಲಿ ಬೆಂಗಳೂರು ನಂ.1" ಎಂಬ ಶಿರೋನಾಮೆಯಡಿ ಪ್ರಕಟವಾಗಿರುವ ವರದಿಯನ್ನು ಪ್ರಸ್ತಾಪಿಸಲು ಬಯಸುತ್ತೇನೆ.

ರಾಜ್ಯದಲ್ಲಿ ಕಳೆದ 5 ವರ್ಷಗಳಲ್ಲಿ 14 ಸಾವಿರಕ್ಕೂ ಅಧಿಕ ಮಕ್ಕಳ ಅಪಹರಣವಾಗಿದೆ. ಅದರಲ್ಲೂ ಅಪಹರಣಕ್ಕೆ ಒಳಗಾದವರು ಮತ್ತು ಕಾಣೆಯಾದವರಲ್ಲಿ ಹೆಣ್ಣು ಮಕ್ಕಳೇ ಹೆಚ್ಚಿರುವುದು ಆತಂಕದ ವಿಷಯವಾಗಿದೆ. ಆಟ-ಪಾಠಗಳಲ್ಲಿ ತೊಡಗಿಸಿಕೊಂಡು ದೇಶದ ಭವಿಷ್ಯದ ಪ್ರಜೆಗಳಾಗಿ ಜೀವನ ರೂಪಿಸಿಕೊಳ್ಳಬೇಕಿರುವ ಮಕ್ಕಳ ಅಪಹರಣ ಹಾಗೂ ನಾಪತ್ತೆ ಪ್ರಕರಣಗಳು ವರ್ಷದಿಂದ ವರ್ಷಕ್ಕೆ ಏರುಗತಿಯಲ್ಲಿದ್ದು, ಅಪಹರಣಗೊಂಡಿರುವ ಮಕ್ಕಳ ಪೈಕಿ 1336 ಪ್ರಕರಣಗಳು ನಿಗೂಢವಾಗಿಯೇ ಉಳಿದಿದೆ.

ನಾಪತ್ತೆಯಾದ ಮಕ್ಕಳ ಪೈಕಿ ಹೆಣ್ಣು ಮಕ್ಕಳೇ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಅಪಹೃತ 10,792 ಹೆಣ್ಣು ಮಕ್ಕಳಲ್ಲಿ 1003 ಹೆಣ್ಣು ಮಕ್ಕಳು ಎಲ್ಲಿದ್ದಾರೆ ಎಂಬ ಸಣ್ಣ ಸುಳಿವೂ ಸಹ ಈವರೆಗೆ ಸಿಕ್ಕಿಲ್ಲ. ಇದು ಹೆಣ್ಣು ಮಕ್ಕಳ ಪಾಲಕರನ್ನು ಆತಂಕಕ್ಕೀಡು ಮಾಡಿದೆ. ಜೊತೆಗೆ 333 ಗಂಡು ಮಕ್ಕಳು ಕೂಡ ಇನ್ನೂ ಪತ್ತೆಯಾಗಿಲ್ಲ. ರಾಜ್ಯ ಪೊಲೀಸರು ವಿವಿಧ ತಾಂತ್ರಿಕ ಆಯಾಮಗಳಲ್ಲಿ ಹುಡುಕಿದರೂ 1336 ಮಕ್ಕಳನ್ನು ಪತ್ತೆಹಚ್ಚಲು ಸಾಧ್ಯವಾಗಿಲ್ಲ. ಮಕ್ಕಳ ನಾಪತ್ತೆ ಪ್ರಕರಣಗಳಲ್ಲಿ ಬೆಂಗಳೂರು ಮೊದಲ ಸ್ಥಾನದಲ್ಲಿದೆ. ಅಪಹರಣ, ನಾಪತ್ತೆ, ಮಕ್ಕಳ ಕಳ್ಳಸಾಗಣೆ ಸೇರಿ ವಿವಿಧ ಕಾರಣಗಳಿಂದ ಮಕ್ಕಳು ಸಾಮಾನ್ಯವಾಗಿ ನಾಪತ್ತೆಯಾಗುತ್ತಾರೆ. ಮಕ್ಕಳನ್ನು ವೇಶ್ಯಾವಾಟಿಕೆಗೆ ತಳ್ಳುವುದು, ಮಕ್ಕಳ ಅಂಗಾಂಗ ಮಾರಾಟ, ಮನೆ ಕೆಲಸಕ್ಕೆ ಬಳಸಿಕೊಳ್ಳುವ ದೊಡ್ಡ ಜಾಲವೇ ಇದೆ.

ಸರ್ಕಾರ ಕೂಡಲೇ ನಾಪತ್ತೆ ಅಥವಾ ಅಪಹರಣಕ್ಕೆ ಒಳಗಾದ ಮಕ್ಕಳ ಕುರಿತು ಜಿಲ್ಲಾ ಮಟ್ಟದಲ್ಲಿ ಮಕ್ಕಳ ಸರ್ವೆ ಮಾಡಬೇಕು, ಪತ್ತೆಹಚ್ಚಲು ಸಾಧ್ಯವಾಗದ ಪ್ರಕರಣಗಳನ್ನು ಶೀಘ್ರವಾಗಿ ಪತ್ತೆ ಹಚ್ಚಲು ಕ್ರಮ ಕೈಗೊಳ್ಳಬೇಕು ಮತ್ತು ಮಕ್ಕಳ ಅಪಹರಣ ಮತ್ತು ನಾಪತ್ತೆ ಪ್ರಕರಣಗಳನ್ನು ತಡೆಯಲು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ಆಗ್ರಹಿಸುತ್ತೇನೆ.

**ಉತ್ತರ:** ರಾಜ್ಯದಲ್ಲಿ ಕಳೆದ 5 ವರ್ಷದಿಂದ ಜುಲೈ-2025ರ ವರೆಗೆ ವರದಿಯಾಗಿರುವ ಗಂಡು ಮಕ್ಕಳು ಹಾಗೂ ಹೆಣ್ಣು ಮಕ್ಕಳ ಅಪಹರಣ/ಕಾಣೆಯಾದ ಮತ್ತು ಪತ್ತೆಯಾದ ಪ್ರಕರಣಗಳ ಸಂಖ್ಯೆ ಈ ಕೆಳಕಂಡಂತಿದೆ:

| ವರ್ಷ | ಗಂಡು ಮಕ್ಕಳು | | | ಹೆಣ್ಣು ಮಕ್ಕಳು | | |
|---|---|---|---|---|---|---|
| | ವರದಿ | ಪತ್ತೆ | ಬಾಕಿ | ವರದಿ | ಪತ್ತೆ | ಬಾಕಿ |
| 2020 | 421 | 402 | 19 | 1137 | 1104 | 33 |
| 2021 | 487 | 462 | 25 | 1630 | 1591 | 39 |
| 2022 | 745 | 715 | 30 | 1829 | 1785 | 44 |
| 2023 | 907 | 869 | 38 | 2131 | 2083 | 48 |
| 2024 | 975 | 920 | 55 | 2446 | 2293 | 153 |
| 2025(ಜುಲೈ) | 551 | 385 | 166 | 1619 | 933 | 686 |
| **ಒಟ್ಟು** | **4086** | **3753** | **333** | **10792** | **9789** | **1003** |

ರಾಜ್ಯದಲ್ಲಿ ಕಳೆದ 05 ವರ್ಷದಲ್ಲಿ ಒಟ್ಟು **14,878** ಮಕ್ಕಳ ಅಪಹರಣ ಪ್ರಕರಣಗಳು ದಾಖಲಾಗಿದ್ದು, ಈ ಪೈಕಿ **13,542** ಪ್ರಕರಣಗಳು ಪತ್ತೆಯಾಗಿದ್ದು, **1336** ಪತ್ತೆ ಹಚ್ಚಲು ಬಾಕಿ ಇರುತ್ತದೆ. ಸದರಿ ಪ್ರಕರಣಗಳಲ್ಲಿ 2020 ರಿಂದ 2025 ಜುಲೈ ವರೆಗೆ ಒಟ್ಟು **634** ಆರೋಪಿಗಳನ್ನು ಬಂಧಿಸಲಾಗಿದೆ.

ಗೌರವಾನ್ವಿತ ಸರ್ವೋಚ್ಚ ನ್ಯಾಯಾಲಯದ ಪ್ರಕರಣ ಸಂಖ್ಯೆ: Horilal V/s Commissioner of Police Delhi, dated: 14/11/2022 ತೀರ್ಪಿನನ್ವಯ ಸರ್ಕಾರವು ಮಕ್ಕಳ ಅಪಹರಣ ಪ್ರಕರಣಗಳಲ್ಲಿ ನಿರ್ಧಿಷ್ಟ ಕಾರ್ಯವಿಧಾನ (ಎಸ್.ಒ.ಪಿ) ಸಂಖ್ಯೆ: ಸಿಆರ್‌ಎಂ-2/224/ರಿಪಿ/2018, ಅನ್ನು ಹೊರಡಿಸಲಾಗಿದೆ. ಇದರನ್ವಯ ಮಕ್ಕಳ ನಾಪತ್ತೆ ಪ್ರಕರಣಗಳನ್ನು ಅಪಹರಣ ಪ್ರಕರಣಗಳೆಂದು ದಾಖಲಿಸಿ ಕಲಂ 363 IPC ಐಪಿಸಿ/137 BNS ಅಡಿಯಲ್ಲಿ ನೋಂದಾಯಿಸಿಕೊಂಡು ತನಿಖೆ ನಿರ್ವಹಿಸಲು ನಿರ್ದೇಶನ ನೀಡಲಾಗಿರುತ್ತದೆ. ಅಪಹರಣ/ನಾಪತ್ತೆ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ ಕಾನೂನು ಕ್ರಮಗಳನ್ನು ಜರುಗಿಸಲಾಗುತ್ತಿದೆ.

**ಮಕ್ಕಳ ಅಪಹರಣ/ಕಾಣೆ / ಕಳ್ಳ ಸಾಗಾಣಿಕೆಯನ್ನು ಸಾಗಾಣಿಕೆ ನಿಯಂತ್ರಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳ ವಿವರಗಳು:-**

- ಮಕ್ಕಳ ಅಪಹರಣ ಪ್ರಕರಣಗಳಲ್ಲಿ ವರದಿಯಾದ ಕೂಡಲೇ ವಿಳಂಬ ಮಾಡದೆ ಎಫ್.ಐ.ಆರ್. ಅನ್ನು ದಾಖಲಿಸಲಾಗುವುದು.
- ಅಪಹರಣ ಪ್ರಕರಣ ವರದಿಯಾದ ಕೂಡಲೇ ರಾಜ್ಯದ ಎಲ್ಲಾ ಠಾಣೆಗಳಿಗೆ ಪ್ರಕರಣದ ಆರೋಪಿ ಮತ್ತು ಅಪಹರಿಸಿರುವ ಮಗುವಿನ ಬಗ್ಗೆ, ಯಾವುದೇ ಸುಳಿವು ದೊರೆತರೆ ಮಾಹಿತಿ ಪಡೆದುಕೊಳ್ಳಲು ಪೋಷಕರ ಒಪ್ಪಿಗೆ ಮೇರೆಗೆ ಪತ್ರಿಕಾ ಪ್ರಕಟಣೆ, ದೂರದರ್ಶನ, ಆಕಾಶವಾಣಿ ಇತ್ಯಾದಿ ಮಾದ್ಯಮಗಳಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.
- ರಾಜ್ಯದ ಗಡಿ ಪ್ರದೇಶಗಳಲ್ಲಿ ಮತ್ತು ಬಸ್ ನಿಲ್ದಾಣ/ರೈಲ್ವೆ ನಿಲ್ದಾಣಗಳಲ್ಲಿ ಭಿತ್ತಿ ಪತ್ರಗಳನ್ನು/ಫೋಟೋಗಳನ್ನು ಅಂಟಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.
- ರಿಜಿನಲ್ ಪಾಸ್‌ಪೋರ್ಟ್ ಆಫೀಸ್ ರವರಿಗೆ ಯಾರಾದರೂ ನವಜಾತ ಮಕ್ಕಳಿಗೆ ಪಾಸ್ ಪೋರ್ಟ್‌ಗೆ ಅರ್ಜಿ ಸಲ್ಲಿಸಿರುವರೇ ಎಂಬ ಬಗ್ಗೆ ಪರಿಶೀಲನೆ ಮಾಡಲಾಗುತ್ತಿದೆ.
- ಲುಕ್-ಔಟ್ ನೋಟೀಸ್ ನೀಡುವುದು, ಅಕ್ಕ-ಪಕ್ಕದ ಜಿಲ್ಲೆಗಳಲ್ಲಿ ಕಾಣೆಯಾದ ಮಕ್ಕಳ ಕುರಿತು ಹುಡುಕಾಟ ನಡೆಸುವುದು.
- ಅಧಿಕಾರಿಗಳ ತಂಡವನ್ನು ನಿರ್ಮಿಸಿ ಎಲ್ಲಾ ಕಡೆ ಹುಡುಕಾಟ ನಡೆಸುವುದು, ಅಕ್ಕ-ಪಕ್ಕದ ಜಿಲ್ಲೆಗಳ ಪೊಲೀಸ್ ಠಾಣೆಗಳಲ್ಲಿ ದಾಖಲಾದ ಅಪರಿಚಿತ ಶವಗಳ UDR ಪ್ರಕರಣಗಳನ್ನು ಪರಿಶೀಲಿಸುವುದು, ಜಿಲ್ಲಾ ಅಪರಾಧ ದಾಖಲಾತಿ ವಿಭಾಗಗಳಲ್ಲಿನ ವರದಿಗಳನ್ನು ಪರಿಶೀಲಿಸುವುದು, ದಿನಪತ್ರಿಕೆ ಮತ್ತು ದೂರದರ್ಶನದಲ್ಲಿ ಕಾಣೆಯಾದ ಮಕ್ಕಳ ಭಾವಚಿತ್ರವನ್ನು ಪ್ರಸಾರ ಮಾಡುವುದು.
- ಪ್ರತಿ ಮಾನವ ಕಳ್ಳ ಸಾಗಾಣಿಕೆ ಘಟಕಗಳಿಗೆ ಹಿರಿಯ ಮತ್ತು ಕಿರಿಯ ಮಕ್ಕಳ ಕಲ್ಯಾಣಾಧಿಕಾರಿಗಳನ್ನು ನಿಯೋಜಿಸಿ, ಅವರುಗಳಿಗೆ ತರಬೇತಿ ನೀಡಲಾಗಿರುತ್ತದೆ.
- ಮಾನವ ಕಳ್ಳ ಸಾಗಾಣಿಕೆ ಮಾಡುವವರ ವಿರುದ್ಧ ಬಾತ್ಮಿ ಸಂಗ್ರಹಿಸಿ ತಪ್ಪಿತಸ್ಥರ ವಿರುದ್ಧ ಕಲಂ 370, 370(A) ಐಪಿಸಿ /143, 144 BNS ಮತ್ತು ಇಮ್‌ಮೋರಲ್ ಟ್ರಾಫಿಕ್

ಪ್ರಿವೆನ್‌ಷನ್ ಆಕ್ಟ್ (ಐ.ಟಿ.ಪಿ.ಎ) ಹಾಗೂ ಸಂಬಂಧಪಟ್ಟ ಇತರೆ ಕಾಯ್ದೆ ರೀತ್ಯಾ ಪ್ರಕರಣಗಳನ್ನು ದಾಖಲಿಸಿ, ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

- ಮಾನವ ಕಳ್ಳ ಸಾಗಾಣಿಕೆಯ ಪ್ರಕರಣಗಳ ತನಿಖೆಯನ್ನು ಸಮರ್ಥವಾಗಿ ನಿರ್ವಹಿಸಲು ತನಿಖಾಧಿಕಾರಿಗಳಿಗಾಗಿ ನಿರ್ದಿಷ್ಟ ಕಾರ್ಯವಿಧಾನವನ್ನು ಸಿದ್ಧಪಡಿಸಿ, ಸ್ಥಾಯಿ ಆದೇಶದ ಮೂಲಕ ರಾಜ್ಯ ಎಲ್ಲಾ ಘಟಕಾಧಿಕಾರಿಗಳಿಗೆ ಕಳುಹಿಸಿಕೊಡಲಾಗಿದೆ.
- ಅಪರಿಚಿತ ವ್ಯಕ್ತಿಗಳ ಬಳಿ ಸಂಪರ್ಕ ಇಟ್ಟುಕೊಳ್ಳದಂತೆ, ಆಸೆ ಆಮಿಷಗಳನ್ನು ಒಡ್ಡುವ ಆಸಾಮಿಗಳ ಬಗ್ಗೆ ಮಹಿಳೆಯರಿಗೆ & ಮಕ್ಕಳಿಗೆ ಹಾಗೂ ಗ್ರಾಮಗಳಲ್ಲಿ ಸೂಕ್ತ ತಿಳುವಳಿಕೆಗಳನ್ನು ನೀಡಲಾಗಿರುತ್ತದೆ.
- ಅಪರಾಧ ಚಟುವಟಿಕೆಗಳಲ್ಲಿ ಹಾಗೂ ಮಕ್ಕಳ ಭಿಕ್ಷಾಟನೆಯಲ್ಲಿ ತೊಡಗಿಸಿರುವಂತಹ ಅಪರಿಚಿತ ವ್ಯಕ್ತಿಗಳು ಕಂಡು ಬಂದಲ್ಲಿ ಠಾಣೆಗೆ ಮಾಹಿತಿ ನೀಡುವಂತೆ ಸೂಚಿಸಲಾಗಿರುತ್ತದೆ.
- ಮಹಿಳೆ ಮತ್ತು ಮಕ್ಕಳ ಸುರಕ್ಷತೆಗಾಗಿ ವಿವಿಧ ಹೆಸರುಗಳಡಿಯಲ್ಲಿ ವಿಶೇಷ ಪಡೆಗಳನ್ನು ರಚಿಸಿದ್ದು, ಸದರಿ ಪಡೆಯು ನಗರದ ಮತ್ತು ಜಿಲ್ಲಾ ವ್ಯಾಪ್ತಿಯ ಶಾಲಾ- ಕಾಲೇಜು, ಪಾರ್ಕ್‌ಗಳು, ಹಾಸ್ಟೆಲ್, ಪಿಜಿ, ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಮತ್ತು ಇತರೆ ಹೆಚ್ಚಾಗಿ ಮಹಿಳೆಯರು ಮತ್ತು ಮಕ್ಕಳು ಓಡಾಡುವ ಸ್ಥಳಗಳ ಪ್ರತಿದಿನ ಗಸ್ತು ಕರ್ತವ್ಯ ನಿರ್ವಹಿಸುತ್ತಾರೆ.
- ಬಸ್ ನಿಲ್ದಾಣ, ರೈಲು ನಿಲ್ದಾಣ, ವಿಮಾಣ ನಿಲ್ದಾಣ ಮತ್ತು ಜನನಿಬಿಡ ಸ್ಥಳಗಳಲ್ಲಿ ಹಾಗೂ ಪ್ರಮುಖ ಸ್ಥಳಗಳನ್ನು ಗುರುತಿಸಿ ಸಿ.ಸಿ.ಟಿ.ವಿ ಕ್ಯಾಮರಾಗಳನ್ನು ಅಳವಡಿಸಿದ್ದು, ಅವುಗಳ ಸಹಾಯದಿಂದ ಮಹಿಳೆಯರ ಮತ್ತು ಮಕ್ಕಳ ಸಾಗಾಟ ಮಾಡುವವರ ಮೇಲೆ ನಿಗಾವಹಿಸಲಾಗಿದೆ.
- ಕೃತ್ಯ ನಡೆದ ಸ್ಥಳದಲ್ಲಿ ಹಾಗೂ ಸುತ್ತಮುತ್ತ ಲಭ್ಯವಿದ್ದ ಸಿ.ಸಿ.ಟಿ.ವಿ ಕ್ಯಾಮರದ ಪುಟೇಜ್ ಗಳನ್ನು ಪರಿಶೀಲನೆ ಮಾಡಲಾಗುತ್ತದೆ.
- ಲಭ್ಯವಿರುವ ಮಾಹಿತಿಯೊಂದಿಗೆ (ಚಹರೆ) ಟ್ರಾಕ್ ಚೈಲ್ಡ್ ತಂತ್ರಾಂಶದಲ್ಲಿ ಮಗುವಿನ ದೈಹಿಕ ಚಹರೆಯನ್ನು ಮಿಸ್ಸಿಂಗ್ ಪರ್ಸನ್ ಬ್ಯೂರೋಗೆ ಕಳುಹಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.
- ಮಾನವ ಕಳ್ಳ ಸಾಗಾಣಿಕೆ ಪ್ರಕರಣಗಳನ್ನು ತಡೆಗಟ್ಟಲು ಮಾನವ ಕಳ್ಳ ಸಾಗಾಣಿಕೆ ನಿಷೇಧ ಘಟಕ ಹಾಗೂ ಸಂಬಂಧಪಟ್ಟ ಎಸ್.ಸಿ.ಆರ್.ಬಿ (ರಾಜ್ಯ ಅಪರಾಧ ದಾಖಲಾತಿ ಘಟಕ) ಮತ್ತು ಎನ್.ಸಿ.ಆರ್.ಬಿ(ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ) ಪೊಲೀಸ್ ಅಧಿಕಾರಿಗಳನ್ನು ಸಂಪರ್ಕಿಸಿ ಮಾನವ ಕಳ್ಳ ಸಾಗಾಣಿಕೆ ಅಪರಾಧಗಳ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿದೆ.
- ಅಪಹರಣಕ್ಕೊಳಗಾದ ಮಗುವಿನ ಭಾವಚಿತ್ರಗಳ ನೋಟಿಸ್‌ಗಳನ್ನು ಸುತ್ತಮುತ್ತಲ್ಲಿನ ಪ್ರದೇಶಗಳಲ್ಲಿ ಅಂಟಿಸುವ ಮೂಲಕ, ಸಾಮಾಜಿಕ ಜಾಲತಾಣಗಳಲ್ಲಿ, ಎಲ್ಲಾ ವರ್ಗದ ಜನತೆಯನ್ನೂ ತಲುಪುವಂತೆ ವ್ಯಾಪಕ ಪ್ರಚಾರ ನೀಡಿ ಸಾರ್ವಜನಿಕರ ಸಹಕಾರದಿಂದ ಈ ಪ್ರಕರಣದಲ್ಲಿ ಅಪಹರಣಕ್ಕೊಳಗಾದ ಮಗು ಮತ್ತು ಆರೋಪಿಯನ್ನು ಪತ್ತೆ ಮಾಡಲಾಗುತ್ತದೆ.
- ಶಾಪಿಂಗ್ ಮಾಲುಗಳು, ಉದ್ಯಾನವನಗಳು, ಮನರಂಜನಾ ಸ್ಥಳಗಳು, ಕ್ರೀಡಾ ಸ್ಥಳಗಳು, ಮತ್ತು ಅಪಹರಣಕ್ಕೊಳಗಾದ ಮಕ್ಕಳು ಸಾಮಾನ್ಯವಾಗಿ ಇರಬಹುದಾದ ಸ್ಥಳಗಳಲ್ಲಿ ಶೋಧನೆ ಮಾಡಿ ಅಪಹರಣಕ್ಕೊಳಗಾದ ಮಗುವನ್ನು ಮತ್ತು ಆರೋಪಿಯನ್ನು ಪತ್ತೆ ಮಾಡಲಾಗುವುದು.

- ಎನ್.ಜಿ.ಓ.ಗಳ ಸಹಕಾರದೊಂದಿಗೆ ಕಾಣೆಯಾದ ಮಕ್ಕಳ ಪತ್ತೆಗಾಗಿ ಶ್ರಮಿಸಲಾಗುತ್ತಿದೆ.
- ನಿರ್ಮಾಣದ ಹಂತದಲ್ಲಿರುವಂತಹ ಕಟ್ಟಡಗಳು, ಬಳಕೆಯಾಗದಂತಹ ಕಟ್ಟಡಗಳು, ಆಸ್ಪತ್ರೆಗಳು ಮತ್ತು ಔಷಧಾಲಯಗಳು, ರೈಲ್ವೆ ಪೊಲೀಸರು ಮತ್ತಿತರ ಸ್ಥಳಗಳಲ್ಲಿ ವಿಚಾರಣೆ ನಡೆಸಿ ಅವರಿಂದ ಮಾಹಿತಿಯನ್ನು ಸಂಗ್ರಹಿಸಿ ಅಪಹರಣಕ್ಕೊಳಗಾದ ಮಗುವನ್ನು ಮತ್ತು ಆರೋಪಿಯನ್ನು ಪತ್ತೆ ಮಾಡಲಾಗುವುದು.
- ಕಾಣೆಯಾದ ಪ್ರಕರಣಗಳ ಪೈಕಿ 120 ದಿನದೊಳಗೆ ಪತ್ತೆಯಾಗದ ಪ್ರಕರಣಗಳನ್ನು ಪರಿಣಾಮಕಾರಿ ತನಿಖೆಗಾಗಿ ವಿಶೇಷ ಘಟಕವಾದ ಎ.ಹೆಚ್.ಟಿ.ಯು (Anti Human Trafficking Unit) ಘಟಕಗಳಿಗೆ ವರ್ಗಾವಣೆ ಮಾಡವುದು.
- ಅನಾಥಶ್ರಮಗಳು, ಆಶ್ರಮಗಳಲ್ಲಿ ಆಧ್ಯಾತ್ಮಿಕ ಸ್ಥಳಗಳಲ್ಲಿ ಮತ್ತು ಬಾಲಮಂದಿರಗಳಲ್ಲಿ ಹುಡುಕುವುದು. ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿನ ಬೀಟ್ ಸಿಬ್ಬಂದಿಗಳ ಮೂಲಕ ಹಾಗೂ ಬೀಟ್ ಗ್ರೂಪ್ ಸದಸ್ಯರ ಮೂಲಕ ಮಾನವ ಕಳ್ಳ ಸಾಗಾಣಿಕೆಗೆ ಸಂಬಂಧಿಸಿದಂತೆ ಮುಂಚಿತವಾಗಿ ಮಾಹಿತಿ ಸಂಗ್ರಹಿಸಿ ಸೂಕ್ತ ಮುಂಜಾಗ್ರತಾ ಕ್ರಮ ಕೈಕೊಳ್ಳುವ ವ್ಯವಸ್ಥೆ ಮಾಡಲಾಗಿದೆ.

ಬೆಂಗಳೂರು ಸೇರಿದಂತೆ ಬೆಳೆಯುತ್ತಿರುವ ನಗರಗಳಲ್ಲಿ ಮಕ್ಕಳ ಅಪಹರಣ ಪ್ರಕರಣಗಳು ವರದಿಯಾಗುತ್ತಿರುವುದನ್ನು ಗಂಭೀರವಾಗಿ ಹಾಗೂ ಆದ್ಯತೆಯ ಪ್ರಕರಣಗಳೆಂದು ಪರಿಗಣಿಸಿ, ಪತ್ತೆಕಾರ್ಯವನ್ನು ಕೈಗೊಳ್ಳುತ್ತಿದೆ.

ಇಂತಹ ಪ್ರಕರಣಗಳನ್ನು ತಡೆಗಟ್ಟಲು ಪೊಲೀಸ್ ಇಲಾಖೆಯು ಸಂಬಂಧಪಟ್ಟ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ ಮುಂತಾದ ಇತರೆ ಇಲಾಖೆಗಳೊಂದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸುತ್ತಿದೆ.

**ಸಂಖ್ಯೆ: ಹೆಚ್‌ಡಿ 76 ಪಿಸಿಕ್ಯೂ 2025**

**(ಡಾ: ಜಿ. ಪರಮೇಶ್ವರ)**
ಗೃಹ ಸಚಿವರು